ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-560 001.

ಸಂಖ್ಯೆ: ವರ್ಗಾವಣೆ ಕೋಶ ಕೌ ಪ್ರ /2020-21 ದಿನಾಂಕ: 24.01.2023

**ಸುತ್ತೋಲೆ**

ವಿಷಯ: ಪ್ರಸ್ತುತ ಚಾಲ್ತಿಯಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಹೆಚ್ಚುವರಿ ಶಿಕ್ಷಕರ ವರ್ಗಾವಣೆ ಕೌನ್ಸೆಲಿಂಗ್ ಪ್ರಕ್ರಿಯೆಗಳನ್ನು ರದ್ದುಗೊಳಿಸಿ ಮುಂದೂಡಿದ ಬಗ್ಗೆ.

ಉಲ್ಲೇಖ:1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಟಿಪ್ಪಣಿ ಸಂಖ್ಯೆ ಪ್ರಾ.ಪ್ರೌ.ಸ.ಸ. 119/ 2023 ದಿನಾಂಕ 24.01.2023.

2. ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ರವರ ದಿನಾಂಕ: 24/01/2023ರಸೂಚನೆಯಂತೆ.

\- - - - - -

ಉಲ್ಲೇಖಿತ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಟಿಪ್ಪಣಿಯಲ್ಲಿನ ಸೂಚನೆಯನ್ವಯ ಪ್ರಸ್ತುತ ಚಾಲ್ತಿಯಲ್ಲಿರುವ "ಕೌನ್ಸೆಲಿಂಗ್ ಮುಖಾಂತರ ಹೆಚ್ಚುವರಿ ಶಿಕ್ಷಕರುಗಳಿಗೆ" ಸ್ಥಳ ನಿಯುಕ್ತಿಗೊಳಿಸಲು ಕೈಗೊಳ್ಳಲಾಗುತ್ತಿರುವ ಕೌನ್ಸೆಲಿಂಗ್ ಪ್ರಕ್ರಿಯೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ತಾತ್ಕಾಲಿಕವಾಗಿ ಹಾಗೂ ಮುಂದಿನ ಆದೇಶದವರೆಗೆ ರದ್ದುಗೊಳಿಸಿ ಮುಂದೂಡಿದೆ.

ದಿನಾಂಕ: 24/01/2023ರಂದು ಯಾವುದಾದರೂ ಶಿಕ್ಷಕರಿಗೆ ಕೌನ್ಸಿಲಿಂಗ್‌ನಲ್ಲಿ ಸ್ಥಳ ನಿಯುಕ್ತಿ ಆದೇಶ ನೀಡಿದ್ದಲ್ಲಿ ಸದರಿ ಆದೇಶಗಳನ್ನು ಸಂಬಂಧಿಸಿದ ಉಪನಿರ್ದೇಶಕರು(ಆಡಳಿತ) ಇವರು ರದ್ದುಪಡಿಸಿ, ಹಿಂಪಡೆಯಲು ಕ್ರಮವಹಿಸುವುದು. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಅದರಂತೆ ಕ್ರಮ ವಹಿಸಲು ಸೂಚಿಸಿದೆ. ಪರಿಷ್ಕೃತ ದಿನಾಂಕವನ್ನು ನಂತರ ತಿಳಿಸಲಾಗುವುದು.

24/01/23
ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)

24/01/2023
ನಿರ್ದೇಶಕರು (ಪ್ರೌಢ ಶಿಕ್ಷಣ)

ಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ.

**ಪ್ರತಿಯನ್ನು:**

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ ಸಲ್ಲಿಸುತ್ತಾ ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಆದ್ಯ ಅವಗಾಹನೆಗಾಗಿ.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ / ಧಾರವಾಡ ವಿಭಾಗ - ಅಗತ್ಯ ಕ್ರಮಕ್ಕಾಗಿ.
4. ವಿಭಾಗೀಯ ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು/ಮೈಸೂರು/ಬೆಳಗಾವಿ / ಕಲಬುರ್ಗಿ - ಅಗತ್ಯ ಕ್ರಮಕ್ಕಾಗಿ

24.01.23